**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 1039/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ 5**

**ದಿನಾಂಕಃ 12.02.2026** **ಸಿಡಬ್ಲ್ಯೂ 8**

| | |
|---|---|
| ಹೆಸರು | ಕಡೆಮನಿ ನಾಗಪ್ಪ |
| ತಂದೆ ಹೆಸರು | ಮಂಜಪ್ಪ |
| ವಯಸ್ಸು | 38 ವರ್ಷ |
| ಉದ್ಯೋಗ | ಪಿ ಸಿ |
| ವಾಸ ಸ್ಥಳ | ಹರಿಹರ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ನಾನು ಸನ್ 2018 ರಿಂದ 2024 ರವರೆಗೆ ಪಿ ಸಿ ಆಗಿ ಮಲೆಬೆನ್ನೂರು ಪೋಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ 30.11.2022 ರಂದು ಚಾಸಾ.9 ರವರ ಠಾಣಾ ಗುನ್ನೆ ನಂ. 223/2022 ರಲ್ಲಿ ಸ್ಥಳಕ್ಕೆ ಬೇಟಿ ನೀಡಿ ಪಂಚನಾಮೆ ಜರುಗಿಸಲು ತಮ್ಮೊಂದಿಗೆ ಕರೆದುಕೊಂಡು ಹೋಗಿದ್ದರು. ಅದರಂತೆ ಘಟನಾ ಸ್ಥಳಕ್ಕೆ ಬೇಟಿ ನೀಡಿ ಸ್ಥಳದಲ್ಲಿ ಚಾಸಾ.9 ರವರ ಉಕ್ತಲೇಖನದನ್ವಯ ಸ್ಥಳ ಪಂಚನಹಾಮೆಯನ್ನು ಬೆರಳಚ್ಚು ಪಡಿಸಿರುತ್ತೇನೆ. ಸಾಕ್ಷಿ ಸಾಕ್ಷಿಯು ಗುರುತಿಸಿದ ಸ್ಥಳ ಪಂಚನಾಮೆಯನ್ನು ಈಗಾಗಲೇ ನಿಪಿ.2 ಎಂದು ಗುರುತಿಸಿದ್ದು, ಸಾಕ್ಷಿ ಗುರುತಿಸಿದ ಸಹಿಯನ್ನು ನಿಪಿ.2 ಸಿ ಎಂದು ಗುರುತಿಸಲಾಯಿತು. ಸದರಿ ಪಂಚನಾಮೆಯನ್ನು ಮಧ್ಯಾಹ್ನ 2.45 ರಿಂದ 3.45 ರವರೆಗೆ ಜರುಗಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ನಾನು ಸ್ಥಳಕ್ಕೆ ಬೇಟಿ ನೀಡಿಲ್ಲ ಹಾಗೂ ಯಾವುದೇ ಪಂಚನಾಮೆಯನ್ನು ಬೆರಳಚ್ಚು ಪಡಿಸಿಲ್ಲ ಎಂದರೆ ಸರಿಯಲ್ಲ. ನಿಪಿ.2 ನ್ನು ಠಾಣೆಯಲ್ಲಿ ತಯಾರಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ .**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ